ನಾಯಕರುಗಳಿಗೆ, ಸಂಘಟನೆಗಳಿಗೆ ಕರೆಯೋಲೆಗಳನ್ನು ಕಳುಹಿಸಿ, ಸರ್ಕಾರದ ಕಾರ್ಯಕ್ರಮಗಳಂತೆ 'ವಿಚಾರ ಸಂಕೀರ್ಣ ಮತ್ತ ಕಮ್ಮಟ' ಗಳನ್ನು ಏರ್ಪಡಿಸುವಂತೆ ಸ್ಥಳೀಯ ಶಾಸಕರು ಮನವಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈವರೆಗೂ ಒಂದೂ ಕಾರ್ಯಕ್ರಮಗಳನ್ನು ರೂಪಿಸದಿರಲು ಕಾರಣಗಳೇನು:

ಇ) ಈ ಕಾರ್ಯಕ್ರಮಗಳನ್ನು ತಾಲ್ಲೂಕಿನಾದ್ಯಂತ ಸರ್ಕಾರ ರೂಪಿಸುವುದೇ?

ಶ್ರೀ ಎ. ನಾರಾಯಣಸ್ವಾಮಿ (ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು):

ಅ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಮತ್ತು ಇ) ಆದರೆ ಇಂತಹ ಕಾರ್ಯಕ್ರಮಗಳನ್ನು ಏರ್ಪಡಿಸ ಲಾಗುವುದು

ಆರೋಗ್ಯ ಕೇಂದ್ರಗಳಲ್ಲಿ ಸಿಬ್ಬಂದಿ ಕೊರತೆ

177 (120) ಶ್ರೀ ರಮೇಶ ಬಂಡಿಸಿದ್ದೇಗೌಡ ಎ.ಬಿ. (ಶ್ರೀರಂಗಪಟ್ಟಣ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಶ್ರೀರಂಗಪಟ್ಟಣ ವಿಧಾನ ಸಭಾ ಕ್ಷೇತ್ರದಲ್ಲಿ ಸರ್ಕಾರದಿಂದ ಮಾನ್ಯತೆ ಪಡೆದಿರುವ/ ಪಡೆಯದಿರುವ ಆಸ್ಪತ್ರೆಗಳು ಯಾವುವು; ವಿವರಗಳನ್ನು ನೀಡುವುದು;

ಆ) ಸಾರ್ವಜನಿಕ ಆಸ್ಪತ್ರೆ ಶ್ರೀರಂಗಪಟ್ಟಣ ತಾಲ್ಲೂಕು ಹಾಗೂ ಸಮುದಾಯ ಆರೋಗ್ಯ ಕೇಂದ್ರ, ವೈದ್ಯಾಧಿಕಾರಿಗಳು/ವೈದ್ಯರು/ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸಿಬ್ಬಂದಿ ನೇಮಕಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ) ಸಮುದಾಯ ಆರೋಗ್ಯ ಕೇಂದ್ರ, ಅರಕೆರೆ ಈ ಆಸ್ಪತ್ರೆಯನ್ನು 100 ಹಾಸಿಗೆಯುಳ್ಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೆ ಏರಿಸುವುದರಿಂದ ಅಗತ್ಯ ಸೌಲಭ್ಯಗಳನ್ನು ನೀಡಲು ಕೈಗೊಳ್ಳಲಾಗುವ ಕ್ರಮಗಳೇನು; ವಿವರ ಒದಗಿಸುವುದು;

ಈ) ಈ ಆಸ್ಪತ್ರೆಗಳಿಗೆ ಪ್ರಸಕ್ತ ಸಾಲಿನಲ್ಲಿ ನೂತನ ಕಟ್ಟಡ ಕಟ್ಟುವ ಯೋಜನೆ ಸರ್ಕಾರದ ಮುಂದೆ ಇದೆಯೇ; ವಿವರಗಳನ್ನು ಒದಗಿಸುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಶ್ರೀರಂಗಪಟ್ಟಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಡಿ ಈ ಕೆಳಕಂಡ ಪ್ರದೇಶಗಳಲ್ಲಿ ಆಸ್ಪತ್ರೆ/ಆರೋಗ್ಯ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ; ಶ್ರೀರಂಗಪಟ್ಟಣ ಕೊತ್ತತ್ತಿ, ಸೂನಗಹಳ್ಳಿ, ಹೆಮ್ಮಿಗೆ, ತಗ್ಗಹಳ್ಳಿ, ಹುಲಿಯೂರು, ತೂಬಿನಕೆರೆ, ಮಂಗಲ, ಬೇಲೂರು, ಕೊಡಿಯಾಲ, ಮಹದೇವಪುರ, ಅರಕೆರೆ, ಕೆ.ಶೆಟ್ಟಿಹಳ್ಳಿ, ಪಾಲಹಳ್ಳಿ ಮತ್ತು ಕೆ.ಆರ್.ಎಸ್. ಖಾಸಗಿ ಆಸ್ಪತ್ರೆಗಳ ನೋಂದಣಿ ಪ್ರಕ್ರಿಯೆ ಪ್ರಸ್ತುತ ಜಾರಿಯಲ್ಲಿದೆ.

ಆ) ಶ್ರೀರಂಗಪಟ್ಟಣ ಸಾರ್ವಜನಿಕ ಆಸ್ಪತ್ರೆಯಲ್ಲಿ 9 ತಜ್ಞರ ಹುದ್ದೆಗಳು ಮಂಜೂರಾಗಿದ್ದು, 4 ತಜ್ಞರು ಅಂದರೆ ಮಕ್ಕಳ ತಜ್ಞರು, ಕೀಲು ಮೂಳೆ ತಜ್ಞರು, ಇ.ಎನ್.ಟಿ. ತಜ್ಞರು ಮತ್ತು ಪ್ರಸೂತಿ ತಜ್ಞರು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ 5 ಹುದ್ದೆಗಳು ಅಂದರೆ ಶಸ್ತ್ರ ಚಿಕಿತ್ಸಕರು, ಫಿಜಿಷಿಯನ್, ಅರವಳಿಕೆ ತಜ್ಞರು, ನೇತ್ರ ತಜ್ಞರು ಮತ್ತು ಚರ್ಮ ರೋಗ ತಜ್ಞರ ಹುದ್ದೆಗಳು ಖಾಲಿ ಇವೆ.

ಸದರಿ ಆಸ್ಪತ್ರೆಯಲ್ಲಿ ಒಬ್ಬ ದಂತ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದು, ಹಿರಿಯ ವೈದ್ಯಾಧಿಕಾರಿಯ ಒಂದು ಹುದ್ದೆಯು ಸಹ ಖಾಲಿ ಇದೆ. ಸದರಿ ಸಾರ್ವಜನಿಕ ಆಸ್ಪತ್ರೆಯಲ್ಲಿ 63 ಅರೆ ವೈದ್ಯಕೀಯ ಸಿಬ್ಬಂದಿ ಹುದ್ದೆಗಳು ಮಂಜೂರಾಗಿದ್ದು, 41 ಅರೆ ವೈದ್ಯಕೀಯ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 22 ಹುದ್ದೆಗಳು ಖಾಲಿ ಇವೆ.

ಅರೆಕೆರೆ ಆರೋಗ್ಯ ಕೇಂದ್ರದಲ್ಲಿ ಇಬ್ಬರು ವೈದ್ಯರು ಹಗೂ 28 ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ.

ಎನ್.ಆರ್.ಹೆಚ್.ಎಂ./ಕೆ.ಹೆಚ್.ಎಸ್.ಡಿ.ಆರ್.ಪಿ. ಯೋಜನೆಗಳ ಅಡಿಯಲ್ಲಿ ವಿವಿಧ ತಜ್ಞ ವೈದ್ಯರನ್ನು ಹಾಗೂ ಸಿಬ್ಬಂದಿಯನ್ನು ಗೌರವಧನ/ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಇ) ಅಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ.

ಈ) ಉದ್ಭವಿಸುವುದಿಲ್ಲ.